ಕರ್ನಾಟಕ ಸರ್ಕಾರ
ಸಾರ್ವಜನಿಕ ಶಿಕ್ಷಣ ಇಲಾಖೆ
**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:ಸಿ7[2]ಪ್ರಾಶಿಅ/ಶಾ.ಶು.ನಿ-57/2019-20 ದಿನಾಂಕ:11-08-2020

: : **ಜ್ಞಾಪನ** : :

ವಿಷಯ: ಅನುದಾನರಹಿತ ಖಾಸಗಿ ಶಾಲೆಗಳಲ್ಲಿ 2020-21ನೇ ಸಾಲಿನಲ್ಲಿ ಪಡೆಯುವ ಶುಲ್ಕವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 31 ಪಿಜಿಸಿ 2019, ದಿನಾಂಕ:24-07-2019[ಕನ್ನಡ ಮತ್ತು ಆಂಗ್ಲ]
2. ಈ ಕಛೇರಿ ಸಮಪತ್ರದ ಸುತ್ತೋಲೆ ದಿನಾಂಕ:18-11-2019 ಮತ್ತು 02-01-2020. ಜ್ಞಾಪನ ದಿನಾಂಕ:04-03-2020.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಅನುದಾನರಹಿತ ಖಾಸಗಿ ಶಾಲೆಗಳಲ್ಲಿ 2020-21ನೇ ಸಾಲಿನಲ್ಲಿ ಪಡೆಯುವ ಶುಲ್ಕವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ 31-12-2019ರ ಒಳಗಾಗಿ ಪ್ರಕಟಿಸುವಂತೆ ಉಲ್ಲೇಖ(2)ರಂತೆ ಸುತ್ತೋಲೆಯನ್ನು ಹೊರಡಿಸಲಾಗಿತ್ತು. ಆದರೆ ಬಹತೇಕ ಖಾಸಗಿ ಶಾಲೆಗಳು ತಮ್ಮ ಶಾಲೆಗಳಲ್ಲಿ ಪಡೆಯುವ ಶುಲ್ಕದ ವಿವರಗಳನ್ನು ಪ್ರಕಟಿಸಿಲ್ಲವಾದ್ದರಿಂದ ಮತ್ತೊಮ್ಮೆ ದಿನಾಂಕ:31-01-2020 ರವರೆಗೆ ಅಂತಿಮವಾಗಿ ಅವಕಾಶವನ್ನು ಕಲ್ಪಿಸಲಾಗಿತ್ತು. ಅಂತಿಮವಾಗಿ ದಿನಾಂಕ:20-03-2020ರ ಒಳಗೆ ಪ್ರಕಟಿಸುವಂತೆ ತಮ್ಮ ವ್ಯಾಪ್ತಿಯ ಶಾಲೆಗಳಿಗೆ ಲಿಖಿತ ಸೂಚನೆ ನೀಡುವಂತೆ ಸೂಚಿಸಲಾಗಿದ್ದರೂ ಸಹಾ ಬಹುತೇಕ ಶಾಲೆಗಳು ವೆಬ್‌ಸೈಟ್‌ನಲ್ಲಿ ಪ್ರಕಟಿಸದೇ ಇರುವುದರಿಂದ ಸರ್ಕಾರದ ಆದೇಶ ಹಾಗೂ ಆಯುಕ್ತಾಲಯದ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸದಿರುವುದನ್ನು ಆಯುಕ್ತಾಲಯವು ಗಂಭೀರವಾಗಿ ಪರಿಗಣಿಸಿದ್ದು, ಇಂತಹ ಪ್ರಕರಣಗಳು ಮರುಕಳಿಸಿದಲ್ಲಿ ಆಯಾ ವ್ಯಾಪ್ತಿಯ ಕ್ಷೇತ್ರಶಿಕ್ಷಣಾಧಿಕಾರಿಗಳನ್ನು ಜವಾಬ್ದಾರನ್ನಾಗಿಸಿ ಸೂಕ್ತ ಕ್ರಮ ಜರುಗಿಸಲಾಗುವುದು. ಈ ಬಗ್ಗೆ ಆಯಾ ವ್ಯಾಪ್ತಿಯ ಉಪನಿರ್ದೇಶಕರು ಆಗಿಂದಾಗ್ಗೆ ಮೇಲ್ವಿಚಾರಣೆ ನಡೆಸಿ ಎಲ್ಲಾ ಅನುದಾನ ರಹಿತ ಶಾಲೆಗಳ ಶುಲ್ಕದ ವಿವರಗಳನ್ನು ವೆಬ್‌ಸೈಟ್ ನಲ್ಲಿ ಪ್ರಕಟಿಸಲು ಕ್ರಮವಹಿಸುವುದು.

ಸರ್ಕಾರದ ಅಧಿಸೂಚನೆಯಂತೆ 2020-21ನೇ ಸಾಲಿನಲ್ಲಿ ಪಡೆಯಬಹುದಾದ ಶುಲ್ಕದ ವಿವರಗಳನ್ನು ಅಂತಿಮವಾಗಿ ದಿನಾಂಕ:30-09-2020ರ ಒಳಗೆ ಇಲಾಖಾ ತಂತ್ರಾಂಶದಲ್ಲಿ ಪ್ರಕಟಿಸದೇ ಇದ್ದಲ್ಲಿ ಅಂತಹ ಶಾಲೆಗಳ ವಿರುದ್ದ ಜಿಲ್ಲಾ ಶಿಕ್ಷಣ ನಿಯಂತ್ರಣಾ ಪ್ರಾಧಿಕಾರದಲ್ಲಿ ಕಡ್ಡಾಯವಾಗಿ ಸ್ವಯಂ ದೂರು ದಾಖಲಿಸಿ, ಕಾನೂನಿನಂತೆ ಕ್ರಮವಹಿಸಿ ಈ ಬಗ್ಗೆ ಪ್ರತಿ ಮಾಹೆಯ 05ನೇ ತಾರೀಖಿನ ಒಳಗೆ ವರದಿ ನೀಡಲು ಸೂಚಿಸಿದೆ.

ವಿ.ಸೂ:-ರಿಟ್ ಪಿಟಿಷನ್ ಸಂಖ್ಯೆ:6185-89/2019 ಮತ್ತು 9149/2019 ಸದರಿ ದಾವೆ ಸಲ್ಲಿಸಿರುವ ಆಡಳಿತ ಮಂಡಳಿಯ ಶಾಲೆಗಳಿಗೆ ಮಾತ್ರ ಮಧ್ಯಂತರ ಆದೇಶ ಇರುವುದರಿಂದ ಈ ದಾವೆಯಲ್ಲಿರುವ ಆಡಳಿತ ಮಂಡಳಿಯಲ್ಲಿ ಬರುವಂತಹ ಶಾಲೆಗಳಿಗೆ ಮತ್ತು ಶುಲ್ಕಕ್ಕೆ ಸಂಬಂಧಿಸಿದಂತೆ ಇತರೆ ಯಾವುದೇ ನ್ಯಾಯಾಲಯದ ತಡೆಯಾಜ್ಞೆ ಇರುವಂತಹ ಶಾಲೆಗಳಿಗೆ ನ್ಯಾಯಾಲಯದ ಮುಂದಿನ ಆದೇಶದವರೆಗೂ ಯಾವುದೇ ಕ್ರಮವಹಿಸದಂತೆ ಸೂಚಿಸಿದೆ. ಹಾಗೂ ಸದರಿ ದಾವೆಗಳನ್ನು ಇತ್ಯರ್ಥಪಡಿಸಲು ಉಪನಿರ್ದೇಶಕರ ಹಂತದಲ್ಲಿ ಸೂಕ್ತ ಕ್ರಮವಹಿಸಲು ಸೂಚಿಸಿದೆ.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ.

ಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು / ವಲಯಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ[ಸಂಬಂಧಿಸಿದ ಉಪನಿರ್ದೇಶಕರ ಮುಖಾಂತರ] ಸೂಕ್ತ ಕ್ರಮಕ್ಕಾಗಿ.
3. ಕಾರ್ಯಕ್ರಮಾಧಿಕಾರಿಳು, ಎಸ್.ಎ.ಟಿ.ಎಸ್ ವಿಭಾಗ, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಖಾಸಗಿ ಶಾಲಾ ಮುಖ್ಯಸ್ಥರು / ಪ್ರಾಂಶುಪಾಲರು /ಅಡಳಿತ ಮಂಡಳಿಗಳಿಗೆ [ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳ ಮುಖಾಂತರ] ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಮಾಹಿತಿಗಾಗಿ
2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ಕೆ.ಆರ್.ಸರ್ಕಲ್, ಬೆಂಗಳೂರು ಇವರ ಮಾಹಿತಿಗಾಗಿ.
3. ನಿರ್ದೇಶಕರು(ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ / ಧಾರವಾಡ ಇವರಿಗೆ ಮಾಹಿತಿ ಹಾಗೂ ಕ್ರಮಕ್ಕಾಗಿ.
5. ಹಿರಿಯ ಸಹಾಯಕ ನಿರ್ದೇಶಕರು,ಇ-ಆಡಳಿತ ವಿಭಾಗ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ.
6. ಕಛೇರಿ ಪ್ರತಿ.